# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ಕವಿಪ್ರನಿನಿ ಮತ್ತು ವಿಸಕಂಗಳ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆ ಘಟಕ

ಸಂಖ್ಯೆ: ಕೆಇಎನ್‌ಡಿಸಿಪಿಎಸ್‌ಸಿ/ಬಿ93/35901/2016-17/ ೮೪೬-೧೦

ಕಾವೇರಿ ಭವನ,
ಬೆಂಗಳೂರು-560009.
ದಿನಾಂಕ: 01 NOV 2016

ಗೆ,

1. ವ್ಯವಸ್ಥಾಪಕ ನಿರ್ದೇಶಕರು,
ಬೆವಿಸಕಂ/ಹುವಿಸಕಂ/ಗುವಿಸಕಂ/ಚಾವಿಸನಿ/ಮವಿಕಂ.
2. ಎಲ್ಲಾ ಆರ್ಥಿಕ ಸಲಹೆಗಾರರು,
ಕವಿಪ್ರನಿನಿ ಮತ್ತು ಎಲ್ಲಾ ವಿಸಕಂಗಳು.

ಮಾನ್ಯರೇ

ವಿಷಯ: ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಯೋಜನೆಯಡಿ ಕವಿಪ್ರನಿನಿ/ವಿಸಕಂಗಳ ನೌಕರರ ಪಿಂಚಣಿ ವಂತಿಗೆಗೆ ಸಂಬಂಧಿಸಿದ ಅನುಬಂಧ-4 ರ ವಿವರಗಳನ್ನು ಜುಲೈ-2016 ರ ಮಾಹೆಯಿಂದ ಆರಂಭಿಸಿ ಮುಂದಿನ ಅವಧಿಗೆ ಲೆಕ್ಕ ಘಟಕಗಳು ನೇರವಾಗಿ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

ಉಲ್ಲೇಖ: 1. ನಿಗಮ ಆದೇಶದ ಸಂಖ್ಯೆ: ಕವಿಪ್ರನಿನಿ/ಬಿ93/35978/2014-15 ದಿ:04.05.2015.
2. ಈ ಕಛೇರಿ ಪತ್ರದ ಸಂಖ್ಯೆ: ಕವಿಪ್ರನಿನಿ/ಬಿ93/35989/2016-17 ದಿ:31.08.2016.
3. ಈ ಕಛೇರಿ ಪತ್ರದ ಸಂಖ್ಯೆ: ಕವಿಪ್ರನಿನಿ/ಬಿ93/35989/2016-17/ಸಿವೈಎಸ್-9 ದಿ:27.09.2016.

*******

ಉಲ್ಲೇಖ (3) ರ ಪತ್ರದಲ್ಲಿ ಕವಿಪ್ರನಿನಿ ಮತ್ತು ಎಲ್ಲಾ ವಿಸಕಂಗಳಲ್ಲಿ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಮಾಸಿಕ ಪಿಂಚಣಿ ವಂತಿಗೆಯ ವಿವರಗಳನ್ನು ಕವಿಪ್ರನಿನಿಯ ಐಟಿ-ಎಂ.ಐ.ಎಸ್ ಘಟಕವು ಸಿದ್ಧಪಡಿಸಿರುವ ಆನ್‌ಲೈನ್ ತಂತ್ರಾಂಶದಲ್ಲಿ ಜುಲೈ-2016 ರ ಮಾಹೆಯಿಂದ ಪ್ರಾರಂಭಿಸಿ ದಾಖಲಿಸುವಂತೆ ಸೂಚಿಸಲಾಗಿತ್ತು ಹಾಗೂ ಇದರ ಬಗೆಗಿನ user manual website ನಲ್ಲಿ ಲಭ್ಯವಿದೆ.

ಆದರೆ ಸದರಿ ತಂತ್ರಾಂಶವನ್ನು ಆನ್‌ಲೈನ್‌ನಲ್ಲಿ ಪರಿಶೀಲಿಸಲಾಗಿ ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಕೆಲವು ಲೆಕ್ಕ ಘಟಕಗಳು ಮಾತ್ರ ತಂತ್ರಾಂಶದಲ್ಲಿ ದಾಖಲಿಸುವ ಕಾರ್ಯವನ್ನು ಪ್ರಾರಂಭಿಸಿದ್ದು ಇನ್ನು ಪೂರ್ಣಗೊಳ್ಳಬೇಕಾಗಿದೆ. ಆದರೆ ಇತರೆ ಕಂಪನಿಗಳು ಹೊಸ ತಂತ್ರಾಂಶದಲ್ಲಿ ಮಾಹಿತಿಯನ್ನು ದಾಖಲಿಸುವ ಕಾರ್ಯವನ್ನು ಪ್ರಾರಂಭಿಸಿ ಪೂರ್ಣಗೊಳಿಸಬೇಕಿರುತ್ತದೆ.

ಮುಂದುವರೆದಂತೆ, ಆನ್‌ಲೈನ್ ತಂತ್ರಾಂಶದಲ್ಲಿ ಜುಲೈ-2016 ರ ಮಾಹೆಯಿಂದ ಈವರೆಗಿನ ಮಾಹಿತಿಯನ್ನು ದಾಖಲಿಸುತ್ತಿಲ್ಲವಾದ್ದರಿಂದ ಎನ್‌ಡಿಸಿಪಿಎಸ್ ನೌಕರರಿಗೆ ಅವರ ವಂತಿಗೆ, ಉದ್ಯೋಗದಾತರ ವಂತಿಗೆ ಮತ್ತು ಒಟ್ಟು Corpus ಬಗೆಗಿನ ಮಾಹಿತಿ ಒದಗಿಸುವುದು ವಿಳಂಬವಾಗುತ್ತಿದೆ. ಈ ವಿಳಂಬಕ್ಕೆ ಸಂಬಂಧಪಟ್ಟ ಕಂಪನಿಗಳೇ ಜವಾಬ್ದಾರರಾಗುತ್ತಾರೆ.

ಕವಿಪ್ರನಿನಿ ಮತ್ತು ಎಲ್ಲಾ ವಿಸಕಂಗಳು ಸದರಿ ತಂತ್ರಾಂಶದಲ್ಲಿ ಮಾಹಿತಿಯನ್ನು ದಾಖಲಿಸುವಂತೆ ಕ್ರಮ ತೆಗೆದುಕೊಳ್ಳುವುದು ಆಯಾಯ ಕಂಪನಿಯ ಆರ್ಥಿಕ ಸಲಹೆಗಾರರ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಆದ್ದರಿಂದ ದಿನಾಂಕ: 15.11.2016 ರೊಳಗೆ ಸದರಿ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಮಾಸಿಕ ಪಿಂಚಣಿ ವಂತಿಗೆಯ ವಿವರಗಳನ್ನು ಆನ್‌ಲೈನ್ ತಂತ್ರಾಂಶದಲ್ಲಿ ದಾಖಲಿಸಲು ತಮ್ಮ ಕೆಳಹಂತದ ಅಧಿಕಾರಿಗಳಿಗೆ ಸೂಚಿಸಿ ಸೂಕ್ತ ಕ್ರಮತೆಗೆದುಕೊಳ್ಳುವಂತೆ ಮತ್ತೊಮ್ಮೆ ಕೋರಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು (ಆ ಮತ್ತು ಮಾ.ಸಂ)
ಕವಿಪ್ರನಿನಿ

ಪುಟ...2.ಕ್ಕೆ

**ಪ್ರತಿಗಳು:**

1. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಆಪ್ತ ಕಾರ್ಯದರ್ಶಿ ರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
2 ವ್ಯವಸ್ಥಾಪಕ ನಿರ್ದೇಶಕರು, ಪಿ.ಸಿ.ಕೆ.ಎಲ್ ರವರ ಆಪ್ತ ಕಾರ್ಯದರ್ಶಿರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
3. ನಿರ್ದೇಶಕರು (ಹಣಕಾಸು), ರವರ ಆಪ್ತ ಕಾರ್ಯದರ್ಶಿರವರಿಗೆ, ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
4. ಎಲ್ಲಾ ಮುಖ್ಯ ಇಂಜಿನಿಯರ್ ಕವಿಪ್ರನಿನಿ / ಎಸ್ಕಾಂಗಳು
5. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ ಕವಿಪ್ರನಿನಿ / ಎಸ್ಕಾಂಗಳು
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ನಿಯಂತ್ರಣಾಧಿಕಾರಿ ಕವಿಪ್ರನಿನಿ / ಎಸ್ಕಾಂಗಳು
7. ಎಲ್ಲಾ ಲೆಕ್ಕಾಧಿಕಾರಿಗಳು ಕವಿಪ್ರನಿನಿ / ಎಸ್ಕಾಂಗಳು
8. ಎಲ್ಲಾ ಲೆಕ್ಕಾಧಿಕಾರಿಗಳು (ಆಂತರಿಕ ತನಿಖೆ) ಕವಿಪ್ರನಿನಿ / ಎಸ್ಕಾಂಗಳು.